ಕರ್ನಾಟಕ ಸರ್ಕಾರ

ಸಂಖ್ಯೆ: ಎಲ್.ಕ್ಯೂ.ಎನ್/02/19-20

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ
ನಿರ್ದೇಶನಾಲಯ, ಆನಂದರಾವ್ ವೃತ್ತ,
ಬೆಂಗಳೂರು-09 ದಿನಾಂಕ: 25-01-2021

## ಸುತ್ತೋಲೆ

ವಿಷಯ: ವಿಧಾನ ಸಭಾ, ಪರಿಷತ್ತಿನ ಅಧಿವೇಶನದ ಬಗ್ಗೆ.

****

ದಿನಾಂಕ: 28/01/2021 ರಿಂದ 05-02-2021ರವರೆಗೆ ನಡೆಯಲಿರುವ ವಿಧಾನ ಸಭಾ/ವಿಧಾನ ಪರಿಷತ್ತಿನ ಅಧಿವೇಶನದ ಅವಧಿಯಲ್ಲಿ ತಮ್ಮ ವ್ಯಾಪ್ತಿಗೆ ಬರುವ ಪ್ರಶ್ನೆಗಳಿಗೆ ಉತ್ತರಗಳನ್ನು ತಕ್ಷಣವೇ ಒದಗಿಸುವ ಸಲುವಾಗಿ ತಮ್ಮ ಸಂಸ್ಥೆಯಲ್ಲಿ ಒಬ್ಬ ಜವಾಬ್ದಾರಿಯುತ ಅಧಿಕಾರಿಯೊಬ್ಬರನ್ನು ನೇಮಿಸಿ ಸಕಾಲದಲ್ಲಿ ಉತ್ತರವನ್ನು ಒದಗಿಸುವಂತೆ ಸೂಚಿಸಲಾಗಿದೆ.

ಅಧಿವೇಶನದ ಅವಧಿ ಮುಗಿಯುವವರೆಗೂ ಪ್ರತಿದಿನ ಕಛೇರಿಯ ಸಮಯದ ನಂತರವೂ ವಿಧಾನ ಮಂಡಲಕ್ಕೆ ಒದಗಿಸಬೇಕಾದ ಮಾಹಿತಿಯನ್ನು ಒದಗಿಸಬಲ್ಲ ಒಬ್ಬ ಅಧಿಕಾರಿಯು ಕಛೇರಿಯಲ್ಲಿದ್ದು ಕಾರ್ಯನಿರ್ವಹಿಸುವ ವ್ಯವಸ್ಥೆಯನ್ನು ಮಾಡಲು ಸೂಚಿಸಲಾಗಿದೆ. ಈ ನಿರ್ದೇಶನಾಲಯದಿಂದ ಅಥವಾ ಸಚಿವಾಲಯದಿಂದ ಕೇಳುವ ಎಲ್ಲಾ ಮಾಹಿತಿಗಳನ್ನು ಕೂಡಲೇ "ಫ್ಯಾಕ್ಸ್" ಅಥವಾ ಮೇಲ್ ಮುಖಾಂತರ ಒದಗಿಸುವ ವ್ಯವಸ್ಥೆಯನ್ನು ಮಾಡಲು ಸೂಚಿಸಲಾಗಿದೆ. ಹಾಗೂ ಜಿಲ್ಲಾ ಆರೋಗ್ಯ ಮತ್ತು ಕು.ಕ.ಅಧಿಕಾರಿಗಳು/ಜಿಲ್ಲಾ ಶಸ್ತ್ರ ಚಿಕಿತ್ಸಕರು/ಅಧೀಕ್ಷಕರು ಸಹ ಕೇಂದ್ರ ಸ್ಥಾನದಲ್ಲಿಯೇ ಇರುವಂತೆ ಸೂಚಿಸಿದೆ. ನಿಯೋಜಿಸಿದ ಅಧಿಕಾರಿಗಳ ಹೆಸರು ಹಾಗೂ ಮೊಬೈಲ್ ಸಂಖ್ಯೆಗಳನ್ನು ಕೂಡಲೇ ಕಳುಹಿಸುವುದು. ಹಾಗೂ ಎಲ್ಲಾ ಮಾಹಿತಿಗಳನ್ನು ಸಿದ್ದಪಡಿಸಿ ಇಟ್ಟುಕೊಳ್ಳಲು ಸೂಚಿಸಿದೆ.

ಆಯುಕ್ತರು
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು.

ಪ್ರತಿಯನ್ನು ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ :

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆಕುಕ ಇಲಾಖೆ, ವಿಕಾಸಸೌಧ, ಬೆಂಗಳೂರು ಇವರ ಮಾಹಿತಿಗಾಗಿ
2. ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು,
3. ಎಲ್ಲಾ ಜಿಲ್ಲಾ ಶಸ್ತ್ರ ಚಿಕಿತ್ಸಕರು ಜಿಲ್ಲಾ ಆಸ್ಪತ್ರೆ
4. ನಿರ್ದೇಶಕರು, ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಸ್ಥೆ, ಮಾಗಡಿ ರಸ್ತೆ, ಬೆಂಗಳೂರು.
5. ಎಲ್ಲಾ ಆಡಳಿತ ವೈದ್ಯಾಧಿಕಾರಿಗಳು, ಸಾರ್ವಜನಿಕ ಆಸ್ಪತ್ರೆ,
6. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು ಮಾಹಿತಿಗಾಗಿ
7. ನಿರ್ದೇಶಕರ ಆಪ್ತ ಶಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಮಾಹಿತಿಗಾಗಿ
8. ಮುಖ್ಯ ಆಡಳಿತಾಧಿಕಾರಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು,